ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ರವರ ನ್ಯಾಯಾಲಯ
ಕೆ ಆರ್ ನಗರ.

**ಸಿಸಿ ನಂ. 1575/2019**

ಪಿರ್ಯಾದುದಾರರುಃ ಕೆ ಆರ್ ನಗರ ಪೊಲೀಸ್ ಠಾಣೆ

ವಿರುದ್ಧ

ಆರೋಪಿತರುಃ

1) ಶ್ರೀನಿವಾಸ ಬಿನ್ ವಿಷಕಂಠಶೆಟ್ಟಿ
40 ವರ್ಷ,

2) ರತ್ನಮ್ಮ ಕೋಂ ಶ್ರೀನಿವಾಸ್,
38 ವರ್ಷ,

ವಾಸಃ ತೊಂಡಾಲು ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ದೋಷಾರೋಪಣೆ**

ಶ್ರೀಮತಿ ಪವಿತ್ರ ಆರ್. ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾದಂಡಾಧಿಕಾರಿಗಳು, ಕೆ ಆರ್ ನಗರ ಆದ ನಾನು ಈ ಕೆಳಗಿನಂತೆ ಅಪರಾಧವನ್ನು ನೀವು ಮಾಡಿರುತ್ತೀರೆಂದು ಆಪಾದಿಸುತ್ತೇನೆ.

ದಿನಾಂಕ 06.04.2018 ರಂದು ರಾತ್ರಿ ಬೆಳಿಗ್ಗೆ 08.30 ಗಂಟೆ ಸಮಯದಲ್ಲಿ ಕೆ ಆರ್ ನಗರ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಕುವೆಂಪು ಬಡಾವಣೆಯಲ್ಲಿ ವಾಸವಾಗಿರುವ ಚಾಸಾ1 ರವರ ಮನೆಗೆ ಆರೋಪಿತರಾದ ನೀವುಗಳು ಹಳೆಯ ದ್ವೇಷದ ಕಾರಣ ಅಪರಾಧ ಸಮಾನ ಉದ್ದೇಶದಿಂದ ಅತಿಕ್ರಮ ಪ್ರವೇಶ ಮಾಡಿರುತ್ತೀರಿ ಆ ಪ್ರಕಾರ ಭಾರತ ದಂಡ ಸಂಹಿತೆ ಕಲಂ 448 ಸಹ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾವನೆಯಲ್ಲಿ ಮಾಡಿರುತ್ತೀರೆಂದು ಆಪಾದಿಸುತ್ತೇನೆ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ನಿಮ್ಮ ಮಗ ದಿಲೀಪ್ ರವರ ಮೇಲೆ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ನೀಡಿರುವ ದೂರನ್ನು ವಾಪಸ್ಸು ತೆಗೆದುಕೊಳ್ಳುವಂತೆ ವಿನಾಕಾರಣ ಚಾಸಾ1 ರವರೊಂದಿಗೆ ಜಗಳ ತೆಗೆದು ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ಬೈದಿರುತ್ತೀರಿ. ಆ ಪ್ರಕಾರ ಭಾರತ ದಂಡ ಸಂಹಿತೆ ಕಲಂ 504 ಸಹ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾವನೆಯಲ್ಲಿ ಮಾಡಿರುತ್ತೀರೆಂದು ಆಪಾದಿಸುತ್ತೇನೆ.

ಮೂರನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಚಾಸಾ1 ರವರ ಮೈ ಕೈಗೆ ಹೊಡೆದು ನೋವುಂಟು ಮಾಡಿರುತ್ತೀರಿ. ಆ ಪ್ರಕಾರ ಭಾರತ ದಂಡ ಸಂಹಿತೆ ಕಲಂ 323 ಸಹ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾವನೆಯಲ್ಲಿ ಮಾಡಿರುತ್ತೀರೆಂದು ಆಪಾದಿಸುತ್ತೇನೆ.

ಕೊನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ನಿಮ್ಮ ಮಗ ದಿಲೀಪ್ ರವರ ಮೇಲೆ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ನೀಡಿರುವ ದೂರನ್ನು ವಾಪಸ್ಸು ತೆಗೆದುಕೊಳ್ಳದಿದ್ದರೆ ನಿನ್ನನ್ನು ಹಾಗೂ ನಿನ್ನ ಮಗನನ್ನು ಚಾಕುವಿನಿಂದ ಕೊಲೆ ಮಾಡುವುದದಾಗಿ ಚಾಸಾ1 ಮತ್ತು 3 ರವರಿಗೆ ಕೊಲೆ ಬೆದರಿಕೆ ಹಾಕಿರುತ್ತೀರಿ. ಆ

ಪ್ರಕಾರ ಭಾರತ ದಂಡ ಸಂಹಿತೆ ಕಲಂ **506** ಸಹ ಕಲಂ **34** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾವನೆಯಲ್ಲಿ ಮಾಡಿರುತ್ತೀರೆಂದು ಆಪಾದಿಸುತ್ತೇನೆ.

ಆದ್ದರಿಂದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಯನ್ನು ಎದುರಿಸಬೇಕೆಂದು ನಿರ್ದೇಶಿಸುತ್ತೇನೆ.

ಸಹಿ/-

ದಿಃ **20.09.2021**

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ.ರವರ ನ್ಯಾಯಾಲಯ,
ಕೆ ಆರ್ ನಗರ.